# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1020(1173)
ಸದಸ್ಯರ ಹೆಸರು : ಶ್ರೀ ಟಿ.ಎ.ಶರವಣ
(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 15-12-2023
ಉತ್ತರಿಸುವ ಸಚಿವರು : ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಪ್ರಸ್ತುತ, ರಾಜ್ಯ ಸರ್ಕಾರದ ಸಾಂಸ್ಕೃತಿಕ ನೀತಿ ಏನಿದೆ; ಸಾಂಸ್ಕೃತಿಕ ನೀತಿ ನಿರೂಪಣೆಗೆ ಸಮಿತಿಯನ್ನು ಯಾವಾಗ ರಚಿಸಲಾಗಿತ್ತು ಮತ್ತು ಅದರಲ್ಲಿರುವ ಪ್ರಮುಖ ಶಿಫಾರಸ್ಸುಗಳಾವುವು; ಜಾರಿಯಾದ ಮತ್ತು ಜಾರಿಯಾಗದ ಶಿಫಾರಸ್ಸುಗಳ ವಿವರ ನೀಡುವುದು; ಮತ್ತು ಸಾಂಸ್ಕೃತಿಕ ನೀತಿಯನ್ನು ಜಾರಿ ಮಾಡದಿರಲು ಕಾರಣಗಳೇನು; | ರಾಜ್ಯದಲ್ಲಿ ಕಲೆ ಮತ್ತು ಸಂಸ್ಕೃತಿಗೆ ಸಂಬಂಧಿಸಿದಂತೆ ಹಾಗೂ ರಾಜ್ಯದ ಸಾಂಸ್ಕೃತಿಕ ಕ್ಷೇತ್ರದ ಒಳಿತಿಗಾಗಿ ಸಾಂಸ್ಕೃತಿಕ ನೀತಿಯನ್ನು ರೂಪಿಸಲಾಗುತ್ತಿದೆ. ಸಾಮಾಜಿಕ ಹಾಗೂ ಸಾಂಸ್ಕೃತಿಕ ಪ್ರಜಾಸತ್ತಾತ್ಮಕತೆಯೇ ಸಾಂಸ್ಕೃತಿಕ ನೀತಿಯ ಕೇಂದ್ರಪ್ರಜ್ಞೆಯಾಗಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ:ಕಸಂವಾಪ್ರ 560 ಕಸಧ 2013, ದಿನಾಂಕ:08.08.2013ರಲ್ಲಿ ಪ್ರೊ.ಬರಗೂರು ರಾಮಚಂದ್ರಪ್ಪ ಇವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದೆ.<br><br>ಸಮಿತಿಯ ಪ್ರಮುಖ ಶಿಫಾರಸ್ಸುಗಳು ಈ ಕೆಳಕಂಡಂತಿದೆ.<br>1. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಬಲೀಕರಣ ಮತ್ತು ಆಡಳಿತ ವಿಕೇಂದ್ರಿಕರಣ<br>2. ಪ್ರಾಚ್ಯವಸ್ತು ಮತ್ತು ಪರಂಪರೆ ಇಲಾಖೆಯಲ್ಲಿ ಹುದ್ದೆಗಳ ಸೃಜನೆ<br>3. ಪ್ರಶಸ್ತಿಗಳ ವಿತರಣೆಯಲ್ಲಿ ಕಾಲಬದ್ಧತೆ ಮತ್ತು ಏಕರೂಪತೆ<br>4. ಸಾಹಿತಿ ಕಲಾವಿದರಿಗೆ ಮಾಸಾಶನ<br>5. ಇಲಾಖೆಯಡಿ ರಚಿತವಾಗಿರುವ ಅಕಾಡೆಮಿಗಳು ಮತ್ತು ಪ್ರಾಧಿಕಾರಗಳ ಸಬಲೀಕರಣ.<br><br>ಸಮಿತಿಯ ಶಿಫಾರಸುಗಳ ಪೈಕಿ ಜಾರಿಯಾದ ಮತ್ತು ಜಾರಿಯಾಗದ ವಿವರಗಳನ್ನು **ಅನುಬಂಧದಲ್ಲಿ** ಒದಗಿಸಿದೆ.<br><br>ಪ್ರೊ.ಬರಗೂರು ರಾಮಚಂದ್ರಪ್ಪರವರ ಸಮಿತಿಯು ನೀಡಿದ ಶಿಫಾರಸುಗಳನ್ನು ಪೂರ್ಣವಾಗಿ ಅನುಷ್ಠಾನಗೊಳಿಸಲು ಸಾಧ್ಯವಾಗಿರದ ಕಾರಣ ಹಾಗೂ ಇಂದಿನ ಕಾಲಘಟ್ಟಕ್ಕೆ ಅನುಗುಣವಾದ ಸಾಂಸ್ಕೃತಿಕ ನೀತಿಯನ್ನು ರೂಪಿಸಲು ಸರ್ಕಾರದ ಆದೇಶ ಸಂಖ್ಯೆ:ಕಸಂವಾ 70 ಕಸಧ 2021, ದಿನಾಂಕ:16.04.2022ರಲ್ಲಿ ಶ್ರೀ ಮಲ್ಲೇಪುರಂ ಜಿ.ವೆಂಕಟೇಶ್, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದ್ದು, ಸಮಿತಿಯಿಂದ ವರದಿ ನಿರೀಕ್ಷಿಸಲಾಗಿದೆ. |

| | | |
|---|---|---|
| (ಆ) | ಸಾಂಸ್ಕೃತಿಕ ನೀತಿ ಕೇಂದ್ರಗಳಿಗೆ ಸದಸ್ಯರು ಮತ್ತು ಅಧ್ಯಕ್ಷರ ನೇಮಕಾತಿಗೆ ಇರುವ ಮಾನದಂಡಗಳು ಯಾವುವು; ಅವರ ಅವಧಿ ಬಗ್ಗೆ ಪೂರ್ಣ ಮಾಹಿತಿ ನೀಡುವುದು; | ಇಲಾಖೆಯ ವ್ಯಾಪ್ತಿಯಲ್ಲಿರುವ ಅಕಾಡೆಮಿ, ಪ್ರಾಧಿಕಾರ, ರಂಗಾಯಣಗಳಿಗೆ ಆಯಾ ಕ್ಷೇತ್ರದಲ್ಲಿ ಅನುಭವ ಹೊಂದಿರುವ ಸಾಹಿತಿ, ಕಲಾವಿದರನ್ನು ಅಧ್ಯಕ್ಷರು ಮತ್ತು ಸದಸ್ಯರನ್ನಾಗಿ ನೇಮಕ ಮಾಡಲಾಗುತ್ತದೆ.<br><br>ಅಧ್ಯಕ್ಷರು ಮತ್ತು ಸದಸ್ಯರ ಅಧಿಕಾರಾವಧಿಯು 03 ವರ್ಷಗಳವರೆಗೆ ಇರುತ್ತದೆ. |
| (ಇ) | ಸರ್ಕಾರ ಬದಲಾದಂತೆ ಸಾಂಸ್ಕೃತಿಕ ಕೇಂದ್ರಗಳ ಕಾರ್ಯಕಾರಿ ಮಂಡಳಿ ಮತ್ತು ನೀತಿ ಬದಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಹಾಗಿದ್ದಲ್ಲಿ ಇದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? | ಬಂದಿದೆ.<br><br>ಆಯಾ ಕಾಲಘಟ್ಟಗಳ ಸರ್ಕಾರವು ತೆಗೆದುಕೊಳ್ಳುವ ನಿರ್ಣಯಗಳನ್ನು ಅನುಸರಿಸಿ ಸಾಂಸ್ಕೃತಿಕ ಕೇಂದ್ರಗಳ ಕಾರ್ಯಕಾರಿ ಮಂಡಳಿ ಮತ್ತು ನೀತಿ ಬದಲಾಗುತ್ತವೆ. ಆಯಾ ಸರ್ಕಾರವು ಕೈಗೊಳ್ಳುವ ನಿರ್ಣಯದಂತೆ ಅನುಪಾಲನಾ ಕ್ರಮ ಕೈಗೊಳ್ಳಲಾಗುತ್ತದೆ. |

ಸಂಖ್ಯೆ: ಕಸಂವಾ 64 ಕವಿಸ 2023

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ
ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

## ಅನುಬಂಧ

| ಕ್ರ. ಸಂ. | ಸಾಂಸ್ಕೃತಿಕ ನೀತಿ ಸಮಿತಿಯ ಶಿಫಾರಸ್ಸುಗಳು | ಅನುಷ್ಠಾನದ ಬಗ್ಗೆ ಕೈಗೊಂಡ ಕ್ರಮ |
|---|---|---|
| 1 | **ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಬಲೀಕರಣ ಮತ್ತು ಆಡಳಿತ ವಿಕೇಂದ್ರಿಕರಣ** | **ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಬಲೀಕರಣ ಮತ್ತು ಆಡಳಿತ ವಿಕೇಂದ್ರಿಕರಣಕ್ಕೆ ಕೆಳಕಂಡಂತೆ ಕ್ರಮಗಳನ್ನು ಕೈಗೊಳ್ಳಲಾಗಿದೆ.**<br>1. ಸರ್ಕಾರದ ಆದೇಶ ಸಂಖ್ಯೆ: ಕಸಂವಾ:53:ಕಸನಿ:ಆಕ:2021, ದಿನಾಂಕ:16.09.2021 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಕಸಂವಾ:53:ಕಸನಿ:ಆಕ:2021, ದಿನಾಂಕ:21.09.2021ರನ್ವಯ ಕೇಂದ್ರ ಕಚೇರಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ 4 ಜಂಟಿ ನಿರ್ದೇಶಕರನ್ನು 04 ಕಂದಾಯ ವಿಭಾಗಗಳಿಗೆ ಸ್ಥಳಾಂತರಿಸಿ ಆದೇಶಿಸಲಾಗಿದೆ. ಅದರಂತೆ ಇಲಾಖೆಯ ಅಧಿಕೃತ ಜ್ಞಾಪನ ಸಂಖ್ಯೆ:ಡಿಕೆಸಿ:36011/94/2021, ದಿನಾಂಕ:21.09.2021ರಲ್ಲಿ ಕೇಂದ್ರ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ 4 ಜಂಟಿ ನಿರ್ದೇಶಕರನ್ನು 4 ಕಂದಾಯ ವಿಭಾಗಗಳಿಗೆ ಸ್ಥಳಾಂತರಿಸಿ ಚಾಲನಾ ಆದೇಶ ಹೊರಡಿಸಲಾಗಿದ್ದು, ಪ್ರಸ್ತುತ ವಲಯ ಜಂಟಿನಿರ್ದೇಶಕರು 04 ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ.<br>2. ವಿಭಾಗ ಮಟ್ಟದ ಕಚೇರಿಗಳಲ್ಲಿ ಹುದ್ದೆಗಳನ್ನು ಸೃಜಿಸಲು ಹಾಗೂ ಸ್ಥಳಾಂತರಿಸಲು, ಒಟ್ಟು 44 ಹುದ್ದೆಗಳಲ್ಲಿ 22 ಹುದ್ದೆಗಳನ್ನು ಸ್ಥಳಾಂತರಿಸಲು, 6 ಹುದ್ದೆಗಳನ್ನು ಸೃಜನೆ ಮಾಡಲು ಮತ್ತು 16 ಹುದ್ದೆಗಳನ್ನು ಹೊರಗುತ್ತಿಗೆ ಮೇಲೆ ಸೇವೆ ಪಡೆಯಲು ಕಡತ ಚಾಲನೆಯಲ್ಲಿರುತ್ತದೆ.<br>3. ಜಿಲ್ಲಾ ಮಟ್ಟದ ಕಚೇರಿಗಳಲ್ಲಿ ಅಧೀಕ್ಷಕರು, ಪ್ರದಸ, ಸೌಂಡ್ ಇಂಜಿನೀಯರ್, ದ್ವಿದಸ/ಕಂಪ್ಯೂಟರ್ ಆಪರೇಟರ್, ಕ್ಲೀನರ್ ಮತ್ತು ದಲಾಯತ್ ಸೇರಿ ಒಟ್ಟು 124 ಹುದ್ದೆಗಳನ್ನು ಸೃಜನೆ ಮಾಡಲು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ.<br>4. ಕೇಂದ್ರ ಕಚೇರಿಯಲ್ಲಿ ಅಪರ ನಿರ್ದೇಶಕರು, ಉಪ ನಿರ್ದೇಶಕರು, ಸಹಾಯಕ ನಿರ್ದೇಶಕರು ಸೇರಿ 6 ಹುದ್ದೆಗಳನ್ನು ಸೃಜನೆ ಮಾಡಲು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ. |
| 2 | **ಪ್ರಾಚ್ಯವಸ್ತು ಮತ್ತು ಪರಂಪರೆ ಇಲಾಖೆ** | ಹಾಲಿ ಈ ಇಲಾಖೆಯನ್ನು ಪ್ರವಾಸೋದ್ಯಮ ಇಲಾಖೆಯ ವ್ಯಾಪ್ತಿಯಲ್ಲಿ ಹಸ್ತಾಂತರಿಸಲಾಗಿದೆ. |
| 3 | **ಪ್ರಶಸ್ತಿಗಳ ವಿತರಣೆ ಕಾಲಬದ್ಧತೆ ಮತ್ತು ಏಕರೂಪತೆ:** | ವಿವಿಧ ಕ್ಷೇತ್ರಗಳಲ್ಲಿ ಸಾಧಕರಿಗೆ ಕೊಡಮಾಡುವ ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿಗಳನ್ನು ಆಯಾ ವರ್ಷದಲ್ಲಿಯೇ ಆಯ್ಕೆ ಸಮಿತಿಯನ್ನು ರಚಿಸಿಕೊಂಡು ಸಭೆಗಳನ್ನು ನಡೆಸಿ ಆಯಾ ವರ್ಷಗಳಲ್ಲಿಯೇ ಪ್ರಶಸ್ತಿ ವಿತರಣೆ ಮಾಡಲು ಪ್ರಾಧ್ಯಾನತೆ ನೀಡಲಾಗುತ್ತಿದೆ. ಇಲಾಖೆಯಿಂದ ನೀಡುವ 4 ರಾಷ್ಟ್ರಮಟ್ಟದ ಪ್ರಶಸ್ತಿಗಳಿಗೆ ರೂ.10.00 ಲಕ್ಷ ಹಾಗೂ ರಾಜ್ಯ ಮಟ್ಟದ 18 ಪ್ರಶಸ್ತಿಗಳಿಗೆ ರೂ.5.00 ಲಕ್ಷಗಳನ್ನು ಏಕರೂಪವಾಗಿ ನಿಗದಿಪಡಿಸಿ ಆದೇಶಿಸಲಾಗಿದೆ. |

| | | |
|---|---|---|
| 4 | **ಸಾಹಿತಿ ಕಲಾವಿದರಿಗೆ ಮಾಸಾಶನ:** | ಸಾಹಿತಿ/ಕಲಾವಿದರಿಗೆ ಪ್ರತಿ ತಿಂಗಳು ಮಾಸಾಶನವನ್ನು ರೂ.1500/- ಗಳಿಂದ ರೂ.2000/-ಗಳಿಗೆ ಹೆಚ್ಚಿಸಿ ನವೆಂಬರ್ 2019 ರಿಂದ ಜಾರಿಗೆ ಬರುವಂತೆ ಆದೇಶಿಸಲಾಗಿದೆ. |
| 5 | **ಇಲಾಖೆಯ ಅಡಿಯಲ್ಲಿ ರಚಿತವಾಗಿರುವ ಅಕಾಡೆಮಿಗಳು ಮತ್ತು ಪ್ರಾಧಿಕಾರಗಳ ಸಬಲೀಕರಣ** | ಅಕಾಡೆಮಿಗಳ ಅಧ್ಯಕ್ಷರು/ಸದಸ್ಯರನ್ನು ನೇಮಕಾತಿ ಮಾಡುವಾಗ ಸಾಮಾಜಿಕ ನ್ಯಾಯ, ಲಿಂಗಾಧಾರಿತ ಪ್ರಾತಿನಿಧ್ಯ , ಪ್ರಾದೇಶಿಕ ನ್ಯಾಯಗಳಿಗೆ ಚ್ಯುತಿ ಬಾರದಂತೆ ಯುವ ಪ್ರತಿಭೆಗಳಿಗೂ ಹಾಗೂ ಎಲ್ಲಾ ವರ್ಗದ ವಿಷಯ ಕ್ಷೇತ್ರ ಪರಿಣಿತರಿಗೆ ಅವಕಾಶ ಕಲ್ಪಿಸಲಾಗಿದೆ. ವಿವಿಧ ಅಕಾಡೆಮಿಗಳ ನಡುವೆ ಸಮನ್ವಯ ಸಾಧಿಸಿ ಸಾಹಿತ್ಯ ಹಾಗೂ ಸಾಂಸ್ಕೃತಿಕ ಸೌಹಾರ್ದ ವೃದ್ಧಿಸುವ ನಿಟ್ಟಿನಲ್ಲಿ ಕ್ರಮವಹಿಸಿ ಆಯಾ ಅಕಾಡೆಮಿಗಳ ಕಾರ್ಯಯೋಜನೆಗಳನ್ನು ಪರಿಗಣಿಸಿ ಅನುದಾನವನ್ನು ನೀಡಲಾಗುತ್ತಿದೆ. ಅಕಾಡೆಮಿಗಳು ಆಯಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಪುಸ್ತಕಗಳ ಪ್ರಕಟಣೆ, ಕಮ್ಮಟ-ಕಾರ್ಯಗಾರಗಳು, ತರಬೇತಿ ಶಿಬಿರಗಳನ್ನು ನಡೆಸುತ್ತಿವೆ. |
| 6 | **ಅಕಾಡೆಮಿಗಳ ವಿಭಾಗೀಕರಣ ಮತ್ತು ಹೆಸರು ಬದಲಾವಣೆ** | ಕರ್ನಾಟಕ ಯಕ್ಷಗಾನ ಮತ್ತು ಬಯಲಾಟ ಅಕಾಡೆಮಿಯು ಪ್ರತ್ಯೇಕ ಪ್ರದೇಶಗಳಲ್ಲಿ ಅತ್ಯಂತ ವ್ಯಾಪಕವಾಗಿ ಮತ್ತು ಜನಪ್ರಿಯ ಕಲಾ ಪ್ರಕಾರವಾಗಿ ರೂಪುಗೊಂಡಿರುವ ಹಿನ್ನೆಲೆಯಲ್ಲಿ ಕರ್ನಾಟಕ ಯಕ್ಷಗಾನ ಅಕಾಡೆಮಿಯಿಂದ ದೊಡ್ಡಾಟ, ಸಣ್ಣಾಟ, ಕೃಷ್ಣ ಪಾರಿಜಾತ ಹಾಗೂ ಬಯಲಾಟ ಪ್ರಕಾರಗಳನ್ನು ಪೋಷಿಸುವ ಸಲುವಾಗಿ ಪ್ರತ್ಯೇಕ ಬಯಲಾಟ ಅಕಾಡೆಮಿಯನ್ನು ರಚಿಸಲಾಗಿದೆ. |
| 7 | **ಸಾಂಸ್ಕೃತಿಕ ಸಂಸ್ಥೆಗಳಿಗೆ ಧನಸಹಾಯ ಮಂಜೂರಾತಿ- ತಜ್ಞರ ಸಮಿತಿ ರಚನೆ:** | ಸಾಂಸ್ಕೃತಿಕ ಸಂಘಟನೆಗಳನ್ನು ಬಲಪಡಿಸಲು ಅರ್ಜಿಗಳನ್ನು ಆಹ್ವಾನಿಸಿ ಕಾಲಬದ್ಧವಾಗಿ ಅವುಗಳನ್ನು ಪರಿಶೀಲಿಸಲು ತಜ್ಞರ ಸಮಿತಿಯನ್ನು ರಚಿಸಿಕೊಂಡು, ಸಮಿತಿಯ ಶಿಫಾರಸ್ಸಿನ ಮೇರೆಗೆ ಧನಸಹಾಯವನ್ನು ಮಂಜೂರು ಮಾಡಲಾಗುತ್ತಿದೆ. ಈ ಸಾಂಸ್ಕೃತಿಕ ಸಂಸ್ಥೆಗಳ ಕಾರ್ಯ ಅಧ್ಯಯನ ಕೈಗೊಳ್ಳಲು ಸಾಮಾಜಿಕ ತಪಾಸಣೆ ಮಾಡಲಾಗುತ್ತಿದೆ. ಮಂಜೂರಾದ ಫಲಾನುಭವಿಗಳ ಸಂಸ್ಥೆಗಳ ವಿವರಗಳನ್ನು ವೆಬ್‌ಸೈಟ್‌ಲ್ಲಿ ಪ್ರಕಟಿಸಲಾಗುತ್ತಿದೆ. |
| 8 | **ಸ್ಕಾಲರ್‌ಶಿಪ್ ಮತ್ತು ಫೆಲೋಶಿಪ್ ನೀಡುವ ಕುರಿತು:** | ವಿವಿಧ ಕ್ಷೇತ್ರಗಳಲ್ಲಿ ಅಧ್ಯಯನ ಮಾಡುವ ವಿದ್ಯಾರ್ಥಿಗಳಿಗೆ ಸ್ಕಾಲರ್‌ಶಿಪ್ ಮತ್ತು ಸಂಶೋಧನೆಯಲ್ಲಿ ತೊಡಗಿರುವ ತಜ್ಞರಿಗೆ ಫೆಲೋಶಿಪ್ ನೀಡುವ ಯೋಜನೆಗಳನ್ನು ಆಯಾ ಅಕಾಡೆಮಿಗಳು ಅನುಷ್ಠಾನಗೊಳಿಸುತ್ತಿವೆ. |
| 9 | **ಕನ್ನಡಶಾಸ್ತ್ರೀಯ ಭಾಷಾಅಧ್ಯಯನ ಮತ್ತುಸಂಶೋಧ ನೆಗೆಒತ್ತು** | ಕನ್ನಡ ಶಾಸ್ತ್ರೀಯ ಭಾಷಾ ಅಧ್ಯಯನ ಮತ್ತು ಸಂಶೋಧನಾ ಕೇಂದ್ರವನ್ನು ಭಾರತೀಯ ಭಾಷಾ ಸಂಸ್ಥಾನದಲ್ಲಿ ಸ್ಥಾಪಿಸಿ ಕೇಂದ್ರ ಮಾನವ ಸಂಪನ್ಮೂಲ ಇಲಾಖೆ ಜೊತೆ ಸಮನ್ವಯ ಸಾಧಿಸಿ ಸಂಶೋಧನೆ ಮತ್ತು ಭವಿಷ್ಯದ ನೆಲೆಗಳನ್ನು ರೂಪಿಸುವ ಅಧ್ಯಯನ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತಿದೆ. |
| 10 | **ಗಡಿನಾಡು ಪ್ರಾಧಿಕಾರದ ವ್ಯಾಪ್ತಿಗೆ ಹೊರನಾಡು:** | ಗಡಿ ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ರಾಜ್ಯದ ಗಡಿ ಹಂಚಿಕೊಂಡಿರುವ 58 ತಾಲ್ಲೂಕುಗಳನ್ನು ಗುರುತಿಸಿದ್ದು, ಹೊರರಾಜ್ಯಗಳಲ್ಲಿಯೂ ಕನ್ನಡ ಭಾಷಿಕರಿರುವ ಸ್ಥಳಗಳಿದ್ದು, ಹೊರನಾಡು ಮತ್ತು ಗಡಿನಾಡು ಪ್ರದೇಶಗಳಲ್ಲಿ ಕನ್ನಡಿಗರ ಸಾಂಸ್ಕೃತಿಕ ಅಗತ್ಯಗಳನ್ನು ಪೂರೈಸಲು, ಸಮಾನ ಅವಕಾಶಗಳನ್ನು ಕಲ್ಪಿಸಲು, ಯೋಜನೆಯನ್ನು ರೂಪಿಸಲು ಕರ್ನಾಟಕ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಕ್ರಮ ಕೈಗೊಳ್ಳುತ್ತಿದೆ. |

3.....

| | | |
|---|---|---|
| 11 | **ಅನ್ವಯಿಕ ಕನ್ನಡ ತಂತ್ರಾಂಶಗಳ ಅಭಿವೃದ್ಧಿ ಮತ್ತು ಆಧುನಿಕ ತಂತ್ರಜ್ಞಾನ ಮಾಧ್ಯಮ ಸದ್ಬಳಕೆ** | ಕನ್ನಡ ನಾಡಿನ ಭಾಷೆಯ ಸಾಹಿತ್ಯ ಸಂಸ್ಕೃತಿ, ಇತಿಹಾಸ ಪರಂಪರೆಗಳ ಹಾಗೂ ಇತರೆ ಕಲೆಗಳನ್ನು ಆಧುನಿಕ ತಂತ್ರಜ್ಞಾನದ ಮೂಲಕ ಸಾರ್ವಜನಿಕರಿಗೆ ತಲುಪಿಸಲು ಕಣಜ ವಿಭಾಗದಿಂದ ಕ್ರಮ ಕೈಗೊಳ್ಳಲಾಗುತ್ತಿದೆ. ಕಣಜ ಯೋಜನೆಯ ಕಾರ್ಯವನ್ನು ಇನ್ನಷ್ಟು ವ್ಯವಸ್ಥಿತಗೊಳಿಸುವ ಉದ್ದೇಶದಿಂದ ಸರ್ಕಾರದ ಆದೇಶ ಸಂಖ್ಯೆ:ಕಸಂವಾ 97 ಕಸನಿ 2022, ದಿನಾಂಕ:10.03.2022ರಲ್ಲಿ ಕಣಜ ಜಾಲತಾಣದ ಸಮಗ್ರ ನಿರ್ವಹಣೆಗಾಗಿ ಮೇಲ್ವಿಚಾರಣಾ ಸಮಿತಿಯನ್ನು ರಚಿಸಲಾಗಿದೆ. |
| 12 | **ರಂಗಮಂದಿರಗಳ ನಿರ್ಮಾಣ ಮತ್ತು ಏಕರೂಪ ನಿರ್ವಹಣೆ** | 15 ಜಿಲ್ಲಾ ರಂಗಮಂದಿರಗಳ ನಿರ್ವಹಣೆಗಾಗಿ ಇಲಾಖೆಯ ಸಹಾಯಕ ನಿರ್ದೇಶಕರು, ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಇರುವ ನಿರ್ವಹಣಾ ಸಮಿತಿಯೊಂದಿಗೆ ಕಾರ್ಯ ನಿರ್ವಹಿಸುತ್ತಿದ್ದಾರೆ. ಸಾಂಸ್ಕೃತಿಕ ಚಟುವಟಿಕೆಗಳಿಗಾಗಿ ರಂಗಮಂದಿರಗಳ ಬಾಡಿಗೆಯನ್ನು ಏಕರೂಪವಾಗಿ ರೂ.2,000/-ಗಳಿಗೆ ನಿಗದಿಪಡಿಸಲಾಗಿದೆ.<br>ಸರ್ಕಾರದ ಆದೇಶ ಸಂಖ್ಯೆ:ಕಸಂವಾ 24 ಕಸಧ 2022, ದಿನಾಂಕ:22.02.2022ರಲ್ಲಿ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರ, ನಯನ ರಂಗಮಂದಿರ, ಸಂಸ ಬಯಲು ರಂಗಮಂದಿರ, ಆರ್ಟ್ ಗ್ಯಾಲರಿ, ಮಹಿಳಾ ವಿಶ್ರಾಂತಿ ಕೊಠಡಿ, ಕಲಾಗ್ರಾಮ ಸಾಂಸ್ಕೃತಿಕ ಸಮುಚ್ಚಯ ಮತ್ತು ಕಲಾಗ್ರಾಮ ಬಯಲು ರಂಗಮಂದಿರ ಕಾಯ್ದಿರಿಸುವಿಕೆಗಾಗಿ ಪರಿಷ್ಕೃತ ಮಾಗಸೂಚಿ ಪ್ರಕಟಿಸಲಾಗಿದೆ. |
| 13 | **ರಂಗಾಯಣಗಳ ರಚನೆ ಮತ್ತು ನಿರ್ವಹಣೆ** | ಹಾಲಿ 6 ರಂಗಾಯಣಗಳು ಕಾರ್ಯ ನಿರ್ವಹಿಸುತ್ತಿದ್ದು, ಪ್ರತಿ ವರ್ಷ ಸದರಿ ರಂಗಾಯಣಗಳಿಗೆ ರೂ.2.00 ಕೋಟಿಯಿಂದ ರೂ.2.50 ಕೋಟಿವರೆಗೆ ಅನುದಾನವನ್ನು ಒದಗಿಸಲಾಗುತ್ತಿದ್ದು, ಉದ್ದೇಶಿತ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. |
| 14 | **ಕಾಲೇಜು ರಂಗೋತ್ಸವ** | ಯುವಜನತೆಯನ್ನು ಸಕ್ರಿಯವಾಗಿ ರಂಗಭೂಮಿ ಚಟುವಟಿಕೆಗಳಲ್ಲಿ ತೊಡಗಿಸುವ ಉದ್ದೇಶದಿಂದ ಜಿಲ್ಲೆ, ವಿಭಾಗ ಮತ್ತು ರಾಜ್ಯ ಹಂತಗಳಲ್ಲಿ ನಾಟಕೋತ್ಸವ ಮತ್ತು ಸ್ಪರ್ಧೆಗಳನ್ನು ರಾಜ್ಯದ ಎಲ್ಲಾ ರಂಗಾಯಣಗಳ ಮೂಲಕ ಆಯೋಜಿಸಲು ಸರ್ಕಾರದ ಪರಿಶೀಲನೆಯಲ್ಲಿದೆ. |
| 15 | **ಉತ್ಸವಗಳಲ್ಲಿ ಸ್ಥಳೀಯರಿಗೆ ಆದ್ಯತೆ:** | ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನಡೆಯುವ ಜಿಲ್ಲಾಮಟ್ಟ, ರಾಜ್ಯಮಟ್ಟ, ರಾಷ್ಟ್ರೀಯ, ಮತ್ತು ಅಂತರಾಷ್ಟ್ರೀಯ ಉತ್ಸವಗಳಲ್ಲಿ ಆಯಾ ಜಿಲ್ಲಾ ಕಲಾವಿದರಿಗೆ ಆದ್ಯತೆ ನೀಡಲು ಕ್ರಮ ವಹಿಸಲಾಗುತ್ತಿದೆ. |
| 16 | **ಜನಪದ ರೆಪರ್ಟರಿ ಸ್ಥಾಪನೆ** | ನಾಡಿನ ಮೌಖಿಕ ಪರಂಪರೆಯ ಜಾನಪದ ಕಲಾವಿದರು ಅವಕಾಶ ಮತ್ತು ಸಂಭಾವನೆ ವಿಷಯದಲ್ಲಿ ತಿಳುವಳಿಕೆ ಕೊರತೆಯಿಂದ ಅನ್ಯಾಯಕ್ಕೊಳಗಾಗಿದ್ದು, ಮಧ್ಯವರ್ತಿಗಳ ಹಾವಳಿ ಇಲ್ಲದೇ ಸಂಭಾವನೆಯನ್ನು ಕಲಾವಿದರಿಗೆ ನೇರವಾಗಿ ತಲುಪಿಸಲು ಹಾಗೂ ಪ್ರಾಚೀನ ಜನಪದ ಕಲೆಗಳ ವಿಷಯದಲ್ಲಿ ತರಬೇತಿ ಮತ್ತು ಪ್ರೋತ್ಸಾಹ ನೀಡಲು 4 ವಿಭಾಗಗಳಲ್ಲಿ ಚಾಮರಾಜನಗರ(ಮೈಸೂರು ವಿಭಾಗ), ರಾಮನಗರ(ಬೆಂಗಳೂರು ವಿಭಾಗ), ವಿಜಯಪುರ(ಬೆಳಗಾವಿ ವಿಭಾಗ), ಕೊಪ್ಪಳ (ಕಲಬುರಗಿ ವಿಭಾಗ)ಗಳಲ್ಲಿ ಜನಪದ ರೆಪರ್ಟರಿ ಸ್ಥಾಪನೆ ಮಾಡಲು ಪ್ರಸ್ತಾವನೆ ಪರಿಶೀಲನೆಯಲ್ಲಿದೆ. |

| | | |
|---|---|---|
| 17 | ಪ್ರವಾಸಿ ಕೇಂದ್ರಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ | ರಾಜ್ಯಕ್ಕೆ ಭೇಟಿ ನೀಡುವ ಪ್ರವಾಸಿಗರಿಗೆ ಪ್ರಮುಖ ಕೇಂದ್ರಗಳಲ್ಲಿ ನಾಡಿನ ಸಾಂಸ್ಕೃತಿಕ ಸಿರಿಯನ್ನು ಪ್ರದರ್ಶಿಸುವ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಿ ಕಲಾವಿದರಿಗೆ ವೇದಿಕೆ ಮತ್ತು ಆರ್ಥಿಕ ಅವಕಾಶಗಳನ್ನು ಒದಗಿಸುವ ಯೋಜನೆಯನ್ನು ರೂಪಿಸಬೇಕೆಂದು ಪ್ರವಾಸೋದ್ಯಮ ಇಲಾಖೆಗೆ ಪತ್ರ ಬರೆಯಲಾಗಿದೆ. |
| 18 | ಕಲಾಕೃತಿಗಳ ಮಾರಾಟ ಕೇಂದ್ರಗಳ ಸ್ಥಾಪನೆ ಮತ್ತು ಕಲಾಕೃತಿಗಳ ಪ್ರದರ್ಶನ: | ರಾಜ್ಯ, ಜಿಲ್ಲೆ ಹಾಗೂ ತಾಲ್ಲೂಕುಗಳಲ್ಲಿ ಸ್ಥಳೀಯ ಕಲಾವಿದರ ಚಿತ್ರ ಕಲಾಕೃತಿಗಳನ್ನು ಮತ್ತು ಶಿಲ್ಪಕಲಾಕೃತಿಗಳನ್ನು ಮಾರಾಟ ಮಾಡಲು ಮಾರಾಟ ಕೇಂದ್ರವನ್ನು ಸ್ಥಾಪಿಸಲು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ. |
| 19 | ಕರ್ನಾಟಕ ಕಲಾ ಗ್ರಾಮ: | ಹಾಲಿ ಬೆಂಗಳೂರಿನಲ್ಲಿ ಕಲಾಗ್ರಾಮವನ್ನು ಸ್ಥಾಪಿಸಲಾಗಿದ್ದು, ಸಾರ್ವಜನಿಕ ಬಳಕೆಯಲ್ಲಿದೆ. |
| 20 | ಬುಡಕಟ್ಟು ವಿಶ್ವವಿದ್ಯಾಲಯ ಸ್ಥಾಪನೆ | ಬುಡಕಟ್ಟು ಜನಾಂಗಗಳು ಮತ್ತು ಸಂಸ್ಕೃತಿಗಳು ವಿಸ್ತಾರವಾಗಿದ್ದು, ಅವುಗಳ ಅಧ್ಯಯನ ಮತ್ತು ಸಂಶೋಧನೆಗೆ ಒಂದು ಪ್ರತ್ಯೇಕ ಬುಡಕಟ್ಟು ವಿಶ್ವವಿದ್ಯಾಲಯ ಸ್ಥಾಪಿಸಲು ಕಾಲೇಜು ಶಿಕ್ಷಣ ಇಲಾಖೆಗೆ ಪತ್ರ ಬರೆಯಲಾಗಿದೆ. |
| 21 | ಸೂಫಿ ಸಂಸ್ಕೃತಿ ಮತ್ತು ತತ್ವಪದ ಅಧ್ಯಯನ ಕೇಂದ್ರ ಸ್ಥಾಪನೆ | ತತ್ವಪದಕಾರರು ಮತ್ತು ಸೂಫಿಗಳ ಬದುಕು ಮತ್ತು ಸಂದೇಶಗಳನ್ನು ಅಧ್ಯಯನ ಮಾಡಿ, ಅವುಗಳ ಸಂರಕ್ಷಣೆ ಮತ್ತು ಪ್ರಸಾರ ಹಾಗೂ ಪ್ರಚಾರಕ್ಕೆ ಅಗತ್ಯ ವ್ಯವಸ್ಥೆಗಳನ್ನು ರೂಪಿಸಲು ಅಧ್ಯಯನ ಕೇಂದ್ರ ಸ್ಥಾಪನೆಗೆ ಆದೇಶ ಹೊರಡಿಸಲು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ. |
| 22 | ಯುವಜನ ಸಂಸ್ಕೃತಿ ಶಿಬಿರ | ಯುವಜನರಲ್ಲಿ ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಅಸ್ಮಿತೆಯ ಬಗ್ಗೆ ಜಾಗೃತಿ ಮತ್ತು ಅಭಿಮಾನ ಮೂಡಿಸುವ ನಿಟ್ಟಿನಲ್ಲಿ ನಿರಂತರ ಚಟುವಟಿಕೆಗಳನ್ನು ಕೈಗೊಳ್ಳಲು ಸಂಸ್ಕೃತಿ ಶಿಬಿರಗಳನ್ನು ಆಯೋಜಿಸುವುದಕ್ಕಾಗಿ ರೂಪುರೇಷೆ ಸಿದ್ಧಪಡಿಸಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮತ್ತು ನೆಹರು ಯುವಕ ಕೇಂದ್ರಗಳ ಮೂಲಕ ಯುವ ಸಂಸ್ಕೃತಿ ಶಿಬಿರಗಳನ್ನು ಏರ್ಪಡಿಸಲು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ. |
| 23 | ತುಳು ಭಾಷೆಗೆ ಸಂವಿಧಾನದ 8ನೇಯ ಪರಿಚ್ಛೇದದಲ್ಲಿ ಸಂವಿಧಾನಿಕ ಮಾನ್ಯತೆ ಪಡೆಯಲು ಪ್ರಯತ್ನ | ತುಳು ಭಾಷೆಗೆ ಸಂವಿಧಾನದ 8ನೇಯ ಪರಿಚ್ಛೇದದಲ್ಲಿ ಸಾಂವಿಧಾನಿಕ ಮಾನ್ಯತೆ ಪಡೆಯಲು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. |

| | | |
|---|---|---|
| 24 | **ವಿವಿಧ ಟ್ರಸ್ಟ್/ಪ್ರತಿಷ್ಠಾನಗಳ ಅವಧಿ ನಿಗದಿ:** | ವಿವಿಧ ಟ್ರಸ್ಟ್ ಮತ್ತು ಪ್ರತಿಷ್ಠಾನಗಳ ಅಧ್ಯಕ್ಷರು/ ಸದಸ್ಯರ ನೇಮಕ ಅವಧಿಕಾರಾವಧಿಯನ್ನು 3 ವರ್ಷ ಕಾಲಾವಧಿಗೆ ನಿಗದಿಪಡಿಸಿ ಆದೇಶ ಹೊರಡಿಸಲಾಗಿದೆ. |
| 25 | **ಪ್ರಾಕೃತ ಮತ್ತು ಪಾಲಿ ಅಧ್ಯಯನ ಕೇಂದ್ರ ಸ್ಥಾಪನೆ** | ಜೈನ ಮತ್ತು ಭೌದ್ಧ ಧರ್ಮಗ್ರಂಥಗಳು ಅಪಾರ ಪ್ರಮಾಣದಲ್ಲಿ ಲಭಿಸಿದ್ದು, ವಿಶ್ವವಿದ್ಯಾಲಯಗಳ ಮೂಲಕ ಅಧ್ಯಯನ ಮತ್ತು ಸಂಶೋಧನೆ ನಡೆಸಲು ಅನುಕೂಲವಾಗುವಂತೆ ಪ್ರಾಕೃತ ಮತ್ತು ಪಾಲಿ ಅಧ್ಯಯನ ಕೇಂದ್ರ ಸ್ಥಾಪಿಸಲು ಹಂಪಿ ಕನ್ನಡ ವಿಶ್ವವಿದ್ಯಾಲಯದ ಮೂಲಕ ಯೋಜನೆಯನ್ನು ರೂಪಿಸಲು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ. |
| 26 | **ಆರ್ಥಿಕ ಸಂಕಷ್ಟದಲ್ಲಿರುವ ಸಾಂಸ್ಕೃತಿಕ ವ್ಯಕ್ತಿಗಳಿಗೆ ಸಹಾಯ ಯೋಜನೆ** | ಆರ್ಥಿಕ ಸಂಕಷ್ಟಕ್ಕೊಳಗಾಗಿ ಕಷ್ಟಕರ ಜೀವನ ನಡೆಸುತ್ತಿರುವ ಪರಿಸ್ಥಿಯಲ್ಲಿರುವ ಸಾಹಿತ್ಯ/ಸಂಗೀತ/ಕಲೆಗಾಗಿ ಕೇಂದ್ರ ಅಥವಾ ರಾಜ್ಯ ಪ್ರಶಸ್ತಿ ಪಡೆದ ಸಾಹಿತಿ/ಕಲಾವಿದರು ಗಂಭೀರ ಸ್ವರೂಪದ ಕಾಯಿಲೆಗೆ ಒಳಗಾದಾಗ, ಅವರಿಗೆ ಪ್ರಕರಣವಾರು Karnataka Government Servants' (Medical Attendance) Rules, 1963ರ ಪ್ರಕಾರ ವೈದ್ಯಕೀಯ ವೆಚ್ಚ ಮರುಪಾವತಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| 27 | **ಸಾಮಾಜಿಕ ತಪಾಸಣೆ:** | ಇಲಾಖೆಯಿಂದ ಧನಸಹಾಯ ಪಡೆದಿರುವ ಸಂಸ್ಥೆಗಳು ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡಿಕೊಂಡಿರುವ ಕುರಿತು ಕೆಲವು ಕಾರ್ಯಕ್ರಮಗಳನ್ನು ಕರ್ನಾಟಕ ಮೌಲ್ಯಮಾಪನ ಪ್ರಾಧಿಕಾರದ ಮೂಲಕ ತಪಾಸಣೆ ನಡೆಸಲಾಗುತ್ತಿದೆ. |